# Akashvani : Bangalore

**24.12.2024** **18.40 hrs**

## ಆಕಾಶವಾಣಿ ಬೆಂಗಳೂರು

## ಪ್ರದೇಶ ಸಮಾಚಾರ

## ಮುಖ್ಯಾಂಶಗಳು

**೧. ಪೊಲೀಸ್ ಇಲಾಖೆ ಜನಸ್ನೇಹಿಯಾಗಿ ಕಾರ್ಯನಿರ್ವಹಿಸುವಂತೆ ಗೃಹ ಸಚಿವ ಡಾ. ಜಿ. ಪರಮೇಶ್ವರ್ ಸೂಚನೆ**

**೨. ಮಂಡ್ಯ ಸಾಹಿತ್ಯ ಸಮ್ಮೇಳನದ ಯಶಸ್ಸಿಗೆ ಸಹಕರಿಸಿದವರಿಗೆ ಧನ್ಯವಾದ ತಿಳಿಸಿದ ಸಚಿವ ಎನ್. ಚೆಲುವರಾಯಸ್ವಾಮಿ**

**೩. ಕರ್ನಾಟಕ ಸಾರಿಗೆ ಸಂಸ್ಥೆಯಿಂದ ೨೦ ಹೊಸ ಅಂಬಾರಿ ಸ್ಲೀಪರ್ ಬಸ್ ಲೋಕಾರ್ಪಣೆ**

**೪. ಬೆಳಗಾವಿ ಅಧಿವೇಶನದಲ್ಲಿ ೨೦೨೫ರ ಕಾಂಗ್ರೆಸ್ ಕ್ರಿಯಾಯೋಜನೆ ಅನಾವರಣಕ್ಕೆ ಎಐಸಿಸಿ ನಿರ್ಧಾರ**

**೫. ರಾಜ್ಯದೆಲ್ಲೆಡೆ ನಾಳೆ ಕ್ರಿಸ್‌ಮಸ್ ಸಡಗರ ; ಚರ್ಚ್‌ಗಳಲ್ಲಿ ವಿಶೇಷ ಪ್ರಾರ್ಥನೆ**

**<><*<><>*><>**

ಜನರಿಗೆ ನ್ಯಾಯ ದೊರಕಿಸುವ ನಿಟ್ಟಿನಲ್ಲಿ ಪೊಲೀಸ್ ಇಲಾಖೆ ಕಾರ್ಯ ಪ್ರವೃತ್ತವಾಗಬೇಕು ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ತಿಳಿಸಿದ್ದಾರೆ. ಹುಬ್ಬಳ್ಳಿಯಲ್ಲಿ ಗೋಕುಲ ರಸ್ತೆ ಪೊಲೀಸ್ ಠಾಣೆಯ ನೂತನ ಕಟ್ಟಡ ಉದ್ಘಾಟಿಸಿ ಮಾತನಾಡಿದ ಅವರು, ಪೋಲಿಸ್ ಇಲಾಖೆಯು ಜನಸ್ನೇಹಿಯಾಗಿ ಕಾರ್ಯನಿರ್ವಹಿಸಬೇಕು ಎಂಬುದು ಸರ್ಕಾರದ ಅಭಿಲಾಷೆಯಾಗಿದೆ ಎಂದು ಹೇಳಿದ್ದಾರೆ. ಕಾನೂನು ಉಲ್ಲಂಘನೆ ಮಾಡುವವರಿಗೆ ಶಿಕ್ಷೆ ವಿಧಿಸುವ ಅಧಿಕಾರ ಪೊಲೀಸರಿಗೆ ಇದೆ. ಪೊಲೀಸ್ ಠಾಣೆಗೆ ಬರುವವರನ್ನು ಅಪರಾಧ ಮಾಡಿದವರ ರೀತಿಯಲ್ಲಿ ಕಾಣಬಾರದು ಎಂದು ತಿಳಿಸಿದ್ದಾರೆ. ರಾಜ್ಯದೆಲ್ಲೆಡೆ ಹೊಸ ವರ್ಷ ಸಂಭ್ರಮಾಚರಣೆ ಸಂದರ್ಭದಲ್ಲಿ ಕಿಡಿಗೇಡಿಗಳ ವಿರುದ್ಧ ಪೊಲೀಸರು ಕಠಿಣ ಕ್ರಮ ತೆಗೆದುಕೊಳ್ಳಬೇಕು ಎಂದು ಸೂಚಿಸಿದ್ದಾರೆ.

**ಧ್ವನಿ : ಗೃಹ ಸಚಿವ ಡಾ. ಜಿ. ಪರಮೇಶ್ವರ್**

ಇದೇ ವೇಳೆ ವಿದ್ಯಾನಗರದಲ್ಲಿ ನೂತನವಾಗಿ ನಿರ್ಮಿಸಿರುವ ವಿದ್ಯಾನಗರ ಪೊಲೀಸ್ ಠಾಣೆ ಹಾಗೂ ಗದಗ ರಸ್ತೆಯಲ್ಲಿರುವ ಹುಬ್ಬಳ್ಳಿ ಗ್ರಾಮೀಣ ಪೊಲೀಸ್ ಠಾಣೆಗಳನ್ನು ಲೋಕಾರ್ಪಣೆಗೊಳಿಸಿದರು.

**<><*<><>*><>**

ಸಕ್ಕರೆ ನಾಡು ಮಂಡ್ಯದಲ್ಲಿ ಜರುಗಿದ ಮೂರು ದಿನಗಳ ಅಕ್ಷರ ಜಾತ್ರೆ ಅಭೂತಪೂರ್ವ ಯಶಸ್ಸನ್ನು ಕಂಡಿದೆ ಎಂದು ಕೃಷಿ ಹಾಗೂ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಎನ್. ಚಲುವರಾಯಸ್ವಾಮಿ ತಿಳಿಸಿದ್ದಾರೆ. ಮಂಡ್ಯದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಪ್ರತಿಯೊಬ್ಬರೂ ಪ್ರಾಮಾಣಿಕ ಹಾಗೂ ಜವಾಬ್ದಾರಿಯಿಂದ ಸಂಪೂರ್ಣವಾಗಿ ತೊಡಗಿಸಿಕೊಂಡು ಕೈಜೋಡಿಸಿ ಸಮ್ಮೇಳನವನ್ನು ಯಶಸ್ವಿಗೊಳಿಸಿದ್ದು, ಎಲ್ಲರಿಗೂ ಹೃದಯಪೂರ್ವಕ ಧನ್ಯವಾದಗಳು ಎಂದು ಹೇಳಿದ್ದಾರೆ. ೮೭ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಸ್ಮರಣಾರ್ಥವಾಗಿ ಮಂಡ್ಯ ಜಿಲ್ಲೆಯಲ್ಲಿ ಕನ್ನಡ ಭವನವನ್ನು ನಿರ್ಮಾಣ ಮಾಡಲಾಗುವುದು ಎಂದು ತಿಳಿಸಿದ್ದಾರೆ. ಇದುವರೆಗೂ ನಡೆದಿರುವ ಸಾಹಿತ್ಯ ಸಮ್ಮೇಳನದಲ್ಲಿ ತಾವು ೨೦ ಸಮ್ಮೇಳನದಲ್ಲಿ ಭಾಗವಹಿಸಿದ್ದು, ಬಹಳ ವ್ಯವಸ್ಥಿತ ಹಾಗೂ ಯಶಸ್ವಿಯಾಗಿ ನಡೆದ ಸಮ್ಮೇಳನವೆಂದರೆ ಅದು ಮಂಡ್ಯದಲ್ಲಿ ನಡೆದ ೮೭ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನವಾಗಿದೆ ಎಂದು ಸಮ್ಮೇಳನಾಧ್ಯಕ್ಷ ಗೊ. ರು. ಚನ್ನಬಸಪ್ಪ ತಮ್ಮ ಅಭಿಪ್ರಾಯವನ್ನು ವ್ಯಕ್ತ ಪಡಿಸಿದ್ದಾರೆ.

<><*<><>*><>

ಕರ್ನಾಟಕ ಸಾರಿಗೆ ಸಂಸ್ಥೆ ಜನರ ಸುಖಕರ ಪ್ರಯಾಣಕ್ಕಾಗಿ ೨೦ ಹೊಸ ಅಂಬಾರಿ ಸ್ಲೀಪರ್ ಬಸ್ ಲೋಕಾರ್ಪಣೆಗೊಳಿಸಿದೆ. ಬೆಂಗಳೂರಿನ ಕೆಂಪೇಗೌಡ ಬಸ್ ನಿಲ್ದಾಣದಲ್ಲಿಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ, ಆರೋಗ್ಯ ಸಚಿವ ದಿನೇಶ್ ಗುಂಡೂರಾವ್, ಬಸ್‌ಗಳ ಸಂಚಾರಕ್ಕೆ ಚಾಲನೆ ನೀಡಿದರು. ಇಂದಿನಿಂದ ಈ ಬಸ್‌ಗಳು ಸಂಚರಿಸಲಿದ್ದು, ಮುರುಡೇಶ್ವರ, ಮಂಗಳೂರು, ಕುಂದಾಪುರ, ವಿಜಯವಾಡ, ಹೈದರಾಬಾದ್, ಎರ್ನಾಕುಲಂ ಸೇರಿದಂತೆ ಹಲವು ರಾಜ್ಯಗಳಲ್ಲಿ ಪ್ರಯಾಣ ಬೆಳೆಸಲಿದೆ. ಈ ಬಸ್ ಅತ್ಯಾಧುನಿಕ ತಂತ್ರಜ್ಞಾನ ಒಳಗೊಂಡಿದ್ದು, ೪೦ ಸೀಟುಗಳು ಆರಾಮದಾಯಕವಾಗಿರಲಿದೆ. ಬಸ್‌ನಲ್ಲಿ ತುರ್ತು ಪರಿಸ್ಥಿತಿಗಳಲ್ಲಿ ಪ್ರಯಾಣಿಕರ ಸುರಕ್ಷತೆಗಾಗಿ ಫೈರ್ ಅಲರಾಂ, ಸುರಕ್ಷತಾ ವ್ಯವಸ್ಥೆ ಅಳವಡಿಸಲಾಗಿದೆ.

<><*<><>*><>

೨೦೨೫ರ ಕಾಂಗ್ರೆಸ್ ಕ್ರಿಯಾ ಯೋಜನೆಯನ್ನು ಬೆಳಗಾವಿಯಲ್ಲಿ ಇದೇ ೨೬ ರಂದು ನಡೆಯಲಿರುವ ಕಾಂಗ್ರೆಸ್ ಕಾರ್ಯಕಾರಿ ಸಮಿತಿ ಸಭೆಯಲ್ಲಿ ಅನಾವರಣಗೊಳಿಸಲಾಗುವುದು ಎಂದು ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ್ ತಿಳಿಸಿದ್ದಾರೆ. ನವದೆಹಲಿಯಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಜೆಪಿ ಆಡಳಿತದಲ್ಲಿ ರಾಷ್ಟ್ರ ಎದುರಿಸುತ್ತಿರುವ ನಿರ್ಣಾಯಕ ಸವಾಲುಗಳ ಕುರಿತು ಚರ್ಚಿಸಲಾಗುವುದು ಎಂದು ಹೇಳಿದ್ದಾರೆ. ಪಕ್ಷದ ಪ್ರಧಾನ ಕಾರ್ಯದರ್ಶಿ ಜೈರಾಮ್ ರಮೇಶ್ ಮಾತನಾಡಿ, ಇದೇ ೨೭ ರಂದು ಬೆಳಗಾವಿಯಲ್ಲಿ 'ಜೈ ಬಾಪು ಜೈ ಭೀಮ್ ಜೈ ಸಂವಿಧಾನ್' ರ್‍ಯಾಲಿಯನ್ನು ಆಯೋಜಿಸಲಾಗಿದೆ ಎಂದು ತಿಳಿಸಿದ್ದಾರೆ.

<><*<><>*><>

ದೇಶಾದ್ಯಂತ ಇಂದು ರಾಷ್ಟ್ರೀಯ ಗ್ರಾಹಕರ ದಿನವನ್ನು ಆಚರಿಸಲಾಗುತ್ತಿದೆ. ಗ್ರಾಹಕರ ಆಂದೋಲನದ ಮಹತ್ವವನ್ನು ಸಾರಲು ಮತ್ತು ಪ್ರತಿಯೊಬ್ಬ ಗ್ರಾಹಕನ ಹಕ್ಕುಗಳು ಮತ್ತು ಜವಾಬ್ದಾರಿಗಳ ಬಗ್ಗೆ ಜಾಗೃತಿ ಮೂಡಿಸಲು ಪ್ರತಿ ವರ್ಷ ಡಿಸೆಂಬರ್ ೨೪ ಅನ್ನು ರಾಷ್ಟ್ರೀಯ ಗ್ರಾಹಕರ ದಿನವಾಗಿ ಆಚರಿಸಲಾಗುತ್ತದೆ. ವಸ್ತುಗಳ ಖರೀದಿಯಲ್ಲಿ ಜಾಗೃತಿ ವಹಿಸಿದಾಗ ಮಾತ್ರ ಗ್ರಾಹಕರು ಮೋಸ ಹೋಗುವುದನ್ನು ತಪ್ಪಿಸಬಹುದಾಗಿದೆ ಎಂದು ಜಿಲ್ಲಾಧಿಕಾರಿ ಜಾನಕಿ ಕೆ.ಎಂ. ಹೇಳಿದ್ದಾರೆ. ಬಾಗಲಕೋಟೆ ಜಿಲ್ಲಾ ಪಂಚಾಯತ್ ಸಭಾಭವನದಲ್ಲಿ ನಡೆದ ರಾಷ್ಟ್ರೀಯ ಗ್ರಾಹಕರ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಗ್ರಾಹಕರಿಲ್ಲದೇ ವರ್ತಕರು ವ್ಯವಹಾರ ಮಾಡಲು ಸಾಧ್ಯವಿಲ್ಲ. ಆದರೆ ವರ್ತಕರು ಒಂದಲ್ಲ ಒಂದು ರೀತಿಯಲ್ಲಿ ಗ್ರಾಹಕರಿಗೆ ಅನ್ಯಾಯ ಮಾಡುತ್ತಿದ್ದು, ವ್ಯವಹರಿಸುವಾಗ ಎಚ್ಚರಿಕೆಯಿಂದ ಇರಬೇಕು ಎಂದು ಸೂಚಿಸಿದ್ದಾರೆ. ಪ್ರತಿಯೊಬ್ಬರು ಒಂದಲ್ಲ ಒಂದು ರೀತಿಯಲ್ಲಿ ಗ್ರಾಹಕರೇ ಆಗಿರುವುದರಿಂದ, ಎಲ್ಲಾ ಸಾರ್ವಜನಿಕರು ಕಡ್ಡಾಯವಾಗಿ ಗ್ರಾಹಕರ ಹಕ್ಕುಗಳ ಬಗ್ಗೆ ತಿಳುವಳಿಕೆ ಹೊಂದಬೇಕು ಎಂದು ನ್ಯಾಯಾಧೀಶರಾದ ಮುಜಾಫರ್ ಎ. ಮಾಂಜರಿ ಕೋಲಾರದಲ್ಲಿ ತಿಳಿಸಿದ್ದಾರೆ. ಗ್ರಾಹಕರ ರಕ್ಷಣೆಗಾಗಿಯೇ ಅನೇಕ ಹಕ್ಕು ಮತ್ತು ಕಾನೂನುಗಳಿದ್ದು, ಇವುಗಳನ್ನು ಪ್ರತಿಯೊಬ್ಬರೂ ತಿಳಿದುಕೊಂಡಾಗ ಮಾತ್ರ ದೈನಂದಿನ ಜೀವನದಲ್ಲಿ ವಂಚನೆ ಮತ್ತು ಮೋಸದಿಂದ ಪಾರಾಗಲು ಸಾಧ್ಯ ಎಂದು ಉಡುಪಿ ಅಪರ ಜಿಲ್ಲಾಧಿಕಾರಿ ಮಮತಾ ದೇವಿ ಜಿ.ಎಸ್ ಹೇಳಿದ್ದಾರೆ.

<><*<><>*><>

ನಾಳೆ ದೇಶಾದ್ಯಂತ ಕ್ರಿಸ್‌ಮಸ್ ಹಬ್ಬದ ಸಡಗರ. ಈ ಹಿನ್ನೆಲೆಯಲ್ಲಿ ರಾಜ್ಯದೆಲ್ಲೆಡೆ ಚರ್ಚ್‌ಗಳನ್ನು ವಿದ್ಯುತ್‌ದೀಪಗಳಿಂದ ಅಲಂಕರಿಸಲಾಗಿದೆ. ಬೆಂಗಳೂರಿನ ಶಿವಾಜಿ ನಗರ ಚರ್ಚ್, ಮಂಗಳೂರು ಸೇರಿದಂತೆ ಹಲವೆಡೆ ಚರ್ಚ್‌ಗಳಲ್ಲಿಯೂ ವಿಶೇಷ ಪ್ರಾರ್ಥನೆ ನಡೆಯುತ್ತಿದೆ. ಯಾದಗಿರಿ ನಗರದ ಕೇಂದ್ರ ಮೆಥೋಡಿಸ್ಟ್ ದೇವಾಲಯ, ತಾತಾ ಸಿಮೆಂಡ್ಸ್ ಚರ್ಚ್ ಸೇರಿದಂತೆ ಜಿಲ್ಲೆಯ ವಿವಿಧ ಚರ್ಚ್‌ಗಳಲ್ಲಿ ಡಿಸೆಂಬರ್ ೧೦ರಿಂದಲೇ ಕ್ರಿಸ್‌ಮಸ್ ಅಂಗವಾಗಿ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಆರಂಭಗೊಂಡಿವೆ. ಎಲ್ಲೆಡೆ ಸಾಂತಾಕ್ಲಾಸ್ ವೇಷ ಧರಿಸಿ ಮಕ್ಕಳನ್ನು ರಂಜಿಸಲಾಗುತ್ತಿದೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಕ್ರಿಸ್‌ಮಸ್‌ಗೆ ಭರದ ಸಿದ್ಧತೆಗಳು ನಡೆಯುತ್ತಿದ್ದು, ಇಂದು ಕ್ರಿಸ್‌ಮಸ್ ಈವ್ ಆಚರಣೆ ಮಾಡಲಾಯಿತು. ಏಸುಕ್ರಿಸ್ತನ ಬಾಲ್ಯದ ದಿನಗಳನ್ನು ನೆನಪಿಸುವ ವೃತ್ತಾಂತಗಳ ಮಾದರಿಗಳನ್ನು ನಿರ್ಮಿಸಿ ಬಣ್ಣ ಬಣ್ಣದ ವಿದ್ಯುತ್ ದೀಪಗಳು, ಅಲಂಕಾರಿಕ ಸಸಿಗಳಿಂದ ಸಿಂಗರಿಸಲಾಗಿದ್ದು, ನೋಡಗರನ್ನು ಆಕರ್ಷಿಸುತ್ತಿವೆ. ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಕ್ರಿಸ್‌ಮಸ್ ಅಂಗವಾಗಿ ಬಣ್ಣಬಣ್ಣದ ದೀಪಾಲಂಕಾರ ಹಾಗೂ ಬೃಹತ್ ಕ್ರಿಸ್‌ಮಸ್ ಟ್ರೀಗಳನ್ನು ಸ್ಥಾಪಿಸಲಾಗಿದೆ.

<><*<><>*><>

ಪ್ರಜೆಗಳು ಸೇವಾ ಮನೋಭಾವದ ರಾಜಕಾರಣಿಗಳನ್ನು ಬಯಸುತ್ತಿಲ್ಲ ಎಂದು ಮಾಜಿ ಕಾನೂನು ಸಚಿವ ಜೆ.ಸಿ.ಮಾಧುಸ್ವಾಮಿ ಅಭಿಪ್ರಾಯಪಟ್ಟಿದ್ದಾರೆ. ತುಮಕೂರು ವಿಶ್ವವಿದ್ಯಾನಿಲಯದಲ್ಲಿ ನಡೆದ ರಾಜ್ಯಶಾಸ್ತ್ರ ಶಿಕ್ಷಕರ ಸಮ್ಮೇಳನದಲ್ಲಿ 'ವರ್ತಮಾನದ ರಾಜಕೀಯವು ಪ್ರಜಾಪ್ರಭುತ್ವಕ್ಕೆ ಅನುಕೂಲಕರವೇ? ಎಂಬ ವಿಷಯದ ಕುರಿತ ಗೋಷ್ಠಿಯಲ್ಲಿ ಮಾತನಾಡಿ ಚುನಾವಣೆಗಳಿಂದ ಮತದಾರ ವಿಷವಾಗುತ್ತಿದ್ದಾನೆ. ಸವಲತ್ತುಗಳ ಆಸೆಯಿಂದ ಸಮಾಜ ಭ್ರಷ್ಟವಾಗುತ್ತಿದೆ. ಅತಿಯಾಸೆಯಿಂದ ವ್ಯವಸ್ಥೆಯನ್ನು ನಾಶ ಮಾಡಲಾಗುತ್ತಿದೆ ಎಂದು ಕಳವಳ ವ್ಯಕ್ತಪಡಿಸಿದ್ದಾರೆ.

<><*<><>*><>

ಶಿಗ್ಗಾಂವಿ ವಿಧಾನಸಭಾ ಕ್ಷೇತ್ರದಲ್ಲಿನ ರೈತರ ಆರ್ಥಿಕಮಟ್ಟ ಹೆಚ್ಚಿಸಲು ಶಾಶ್ವತವಾದ ನೀರಾವರಿ ಯೋಜನೆ ಅವಶ್ಯವಾಗಿದೆ ಎಂದು ಶಾಸಕ ಯಾಸೀರ್ ಅಹ್ಮದ್‌ಖಾನ್ ಪಠಾಣ್ ತಿಳಿಸಿದ್ದಾರೆ. ಶಿಗ್ಗಾಂವಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅದಕ್ಕಾಗಿ ವರದಾ-ಬೇಡ್ತಿ ನದಿಗಳ ಜೋಡಣೆ ಕಾರ್ಯ ಆಗಬೇಕಾಗಿದೆ. ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳಲ್ಲಿ ಯಾವುದೇ ಶಾಶ್ವತವಾದ ನೀರಾವರಿ ಯೋಜನೆಗಳಿಲ್ಲದೆ ರೈತರು ಆರ್ಥಿಕವಾಗಿ ತೀರಾ ಕುಗ್ಗಿ ಹೋಗಿದ್ದಾರೆ. ಜಿಲ್ಲೆಯಲ್ಲಿ ವರ್ಷಕ್ಕೆ ಮೂರು ಬೆಳೆ ತೆಗೆಯುವಂತೆ ನೀರಾವರಿ ಯೋಜನೆ ಜಾರಿಗೆ ತರಬೇಕು ಎಂದು ಸರ್ಕಾರವನ್ನು ಒತ್ತಾಯಿಸಿದ್ದಾರೆ.

<><*<><>*><>

ಚಿತ್ರದುರ್ಗ ಜಿಲ್ಲೆಯ ಎಲ್ಲಾ ಶಾಲಾ-ಕಾಲೇಜುಗಳಲ್ಲಿ ಮಕ್ಕಳ ರಕ್ಷಣಾ ನೀತಿ-೨೦೧೬ ಪರಿಣಾಮಕಾರಿಯಾಗಿ ಜಾರಿಗೆ ತರಬೇಕು ಎಂದು ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಡಾ.ಕೆ.ಟಿ.ತಿಪ್ಪೇಸ್ವಾಮಿ ತಿಳಿಸಿದ್ದಾರೆ. 'ಶಾಲೆಯಲ್ಲಿದೆ ಶಿಕ್ಷಣದ ಜೊತೆಗೆ ರಕ್ಷಣೆ' ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಮಕ್ಕಳ ರಕ್ಷಣಾ ನೀತಿಯಲ್ಲಿ ಮಕ್ಕಳಿಗೆ ಒದಗಿಸಬೇಕಾದ ಮೂಲ ಸೌಕರ್ಯಗಳು, ಭದ್ರತೆ, ಮಕ್ಕಳ ರಕ್ಷಣೆಗೆ ಕೈಗೊಳ್ಳಬೇಕಾದ ಕ್ರಮಗಳು, ಮುಂತಾದ ವಿಷಯಗಳ ಕುರಿತು ವಿಶೇಷ ಹಾಗೂ ವಿವರವಾದ ನಿಯಮಗಳಿವೆ. ಇವುಗಳನ್ನು ಶಾಲೆಗಳಲ್ಲಿ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಬೇಕು ಎಂದು ಸೂಚಿಸಿದ್ದಾರೆ.

<><*<><>*><>

ರಾಮನಗರ ಜಿಲ್ಲಾ ಕಂದಾಯ ಘಟಕದಲ್ಲಿ ಖಾಲಿ ಇರುವ ೫೧ ಗ್ರಾಮ ಆಡಳಿತ ಅಧಿಕಾರಿಗಳ ಹುದ್ದೆಗಳನ್ನು ನೇಮಕಾತಿ ಮಾಡುವ ಸಂಬಂಧ ೧:೩ ಅನುಪಾತದಲ್ಲಿ ಅಭ್ಯರ್ಥಿಗಳ ದಾಖಲಾತಿ ಪರಿಶೀಲನೆಗಾಗಿ ತಾತ್ಕಾಲಿಕ ಪರಿಶೀಲನಾ ಪಟ್ಟಿ ಪ್ರಕಟಿಸಲಾಗಿದೆ. ಅಭ್ಯರ್ಥಿಗಳು ದಾಖಲಾತಿ ಪರಿಶೀಲನೆಗಾಗಿ ಮೂಲ ದಾಖಲಾತಿಗಳೊಂದಿಗೆ ಸಾಮಾನ್ಯ ವರ್ಗ ಮೀಸಲಾತಿಯಲ್ಲಿ ಆಯ್ಕೆಯಾಗಿರುವ ಅಭ್ಯರ್ಥಿಗಳು ೨೦೨೫ರ ಜನವರಿ ೨ರಂದು, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಪ್ರವರ್ಗ-೧ರ ಮೀಸಲಾತಿಯಲ್ಲಿ

ಆಯ್ಕೆಯಾಗಿರುವ ಅಭ್ಯರ್ಥಿಗಳು ಜನವರಿ ೩ರಂದು ಹಾಗೂ ಪ್ರವರ್ಗ-೨ಎ, ೨ಬಿ, ೩ಎ, ೩ಬಿ ಮೀಸಲಾತಿಯಲ್ಲಿ ಆಯ್ಕೆಯಾಗಿರುವ ಅಭ್ಯರ್ಥಿಗಳು ಜನವರಿ ೪ರಂದು ಬೆಳಿಗ್ಗೆ ೧೧ ಗಂಟೆಯಿಂದ ಸಂಜೆ ೫ ಗಂಟೆಯವರೆಗೆ ರಾಮನಗರದ ಜಿಲ್ಲಾಧಿಕಾರಿಗಳ ನ್ಯಾಯಾಲಯ ಸಭಾಂಗಣದಲ್ಲಿ ನಡೆಯುವ ಪರಿಶೀಲನೆಗೆ ಹಾಜರಾಗುವಂತೆ ಜಿಲ್ಲಾಧಿಕಾರಿ ತಿಳಿಸಿದ್ದಾರೆ.

**<><*<><>*><>**

ಸಂಕ್ಷಿಪ್ತ ಸುದ್ದಿಗಳು

೧. ಬೆಂಗಳೂರಿನಲ್ಲಿ ನಡೆದ ಹಿರಿಯರ ರಾಷ್ಟ್ರೀಯ ಬ್ಯಾಡ್ಮಿಂಟನ್ ಪುರುಷರ ಸಿಂಗಲ್ಸ್ ಪ್ರಶಸ್ತಿಯನ್ನು ಕರ್ನಾಟಕದ ಎಂ.ರಘು ಗೆದ್ದಿದ್ದಾರೆ. ಮಹಿಳೆಯರ ಸಿಂಗಲ್ಸ್ ಕಿರೀಟವನ್ನು ಹರಿಯಾನದ ದೇವಿಕಾ ಸಿಂಗ್ ಮುಡಿಗೇರಿಸಿಕೊಂಡಿದ್ದಾರೆ.

೨. ಬೆಂಗಳೂರಿನಲ್ಲಿ ೫೬ ಲಕ್ಷ ರೂಪಾಯಿ ಸೈಬರ್ ವಂಚನೆಗೆ ಸಂಬಂಧಿಸಿದಂತೆ ೬ ಮಂದಿಯನ್ನು ಬಂಧಿಸಲಾಗಿದೆ ಎಂದು ಪೊಲೀಸ್ ಆಯುಕ್ತ ಬಿ. ದಯಾನಂದ್ ತಿಳಿಸಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**